ಪ್ರಸ್ತಾವವನ್ನು ಅಂಗೀಕರಿಸಲಾಯಿತು ಮತ್ತು ಬೇಡಿಕೆಗಳನ್ನು ಮಂಜೂರು ಮಾಡಲಾಯಿತು.

(ಉಪಾಧ್ಯಕ್ಷರ ಆದೇಶದ ಮೇರೆಗೆ ಮಂಜೂರಾದ ಬೇಡಿಕೆಗಳನ್ನು ಈ ಕೆಳಗೆ ನಮೂದಿಸಲಾಗಿದೆ)

ಅಭಿಯಾಚನೆ ಕ್ರಮಾಂಕ 03- ಪಶು ಸಂಗೋಪನೆ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಪಶು ಸಂಗೋಪನೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,48,64,10,000 ರೂಪಾಯಿಗಳಿಗಿಂತ ಮಿಗದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು''

ಅಭಿಯಾಚನೆ ಕ್ರಮಾಂಕ 53- ಸಕ್ಕರೆ

''ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31-3-2001ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ''ಸಕ್ಕರೆ'' ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 31,16,000ರೂಪಾಯಿಗಳಿಗಿಂತ ಮಿಗದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 201,00,000 ರೂಪಾಯಿಗಳಿಗಿಂತ ಮಿಗದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು''.

ಬೇಡಿಕೆ ಸಂಖ್ಯೆ 4

ಮಿನುಗಾರಿಕೆ ಹಂದರು ಮತ್ತು ಪ್ರದೇಶಾಭಿವೃದ್ಧಿ ಇಲಾಖೆ ಬೇಡಿಕೆಯ ಮೇಲಿನ ಚರ್ಚೆಗೆ ಉತ್ತರ.

+ಶ್ರೀ ಬಿ. ರಮಾನಾಥ ರೈ (ಮಿನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು): ಮಾನ್ಯ ಉಪಾಧ್ಯಕ್ಷರೆ, ಈ ಸದನದಲ್ಲಿ ನನಗೆ ವಹಿಸರತಕ್ಕಂಥ ಮಿನುಗಾರಿಕೆ ಇಲಾಖೆಯ ಬಗ್ಗೆ ವಿಶೇಷವಾದ ಚರ್ಚೆ ನಡೆಯದಿದ್ದರೂ ಕೂಡ ಈ ಇಲಾಖಾ ಬೇಡಿಕೆಯನ್ನು ಮಂಜೂರು ಮಾಡಿಕೊಡತಕ್ಕಂಥ ಉದ್ದೇಶದಿಂದ ಕೆಲವು ವಿಚಾರಗಳನ್ನು ನಾನು ಹೇಳಲಿಕ್ಕೆ ಬಯಸುತ್ತೇನೆ. ಕರ್ನಾಟಕ ರಾಜ್ಯದಲ್ಲಿ 300 ಕಿ.ಮಿ ಉದ್ದದಷ್ಟು ಕರಾವಳಿ ಪ್ರದೇಶ ಇದ್ದು, ಈ ಭಾಗದಲ್ಲಿ ಸಮುದ್ರ ಮಿನುಗಾರಿಕೆ ಅಭಿವೃದ್ಧಿಗೆ ವಿಫುಲ ಅವಕಾಶವಿದೆ. ಹಾಗೆಯೇ ಸುಮಾರು 5 ಲಕ್ಷಕ್ಕೂ ಹೆಚ್ಚು ಹೆಕ್ಟೇರ್ ಜಲ ವಿಸ್ತೀರ್ಣವುಳ್ಳ ಒಳನಾಡು ಪ್ರದೇಶವಿದ್ದು ಒಳನಾಡು ಮಿನುಗಾರಿಕೆ ಅಭಿವೃದ್ಧಿಗೆ ಒಳ್ಳೆಯ ಸಂಪನ್ಮೂಲವನ್ನು ಒದಗಿಸತಕ್ಕಂಥ ಅವಕಾಶವಿದೆ. ಮಿನುಗಾರಿಕೆಯನ್ನು ಅಭಿವೃದ್ಧಿಪಡಿಸತಕ್ಕಂಥ ದಿಶೆಯಲ್ಲಿ ಸರ್ಕಾರ ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಂಡು ಬಂದಿದೆ. ಇದರ ಫಲವಾಗಿ ರಾಜ್ಯದ ಮಿನು ಉತ್ಪಾದನೆ ಹೆಚ್ಚಾಗಿ ಮಿನುಗಾರರ ಸಾಮಾಜಿಕ, ಆರ್ಥಿಕ ಪರಿಸ್ಥಿತಿಯಲ್ಲಿ ಅಭಿವೃದ್ಧಿ ಸಾಧಿಸಲು ಸಹಾಯಕವಾಗಿದೆ. ಕರಾವಳಿ ಪ್ರದೇಶದಲ್ಲಿ ಮಿನುಗಾರಿಕೆಗೆ ಮೂಲಭೂತ ಸೌಲಭ್ಯವನ್ನು ಒದಗಿಸತಕ್ಕಂಥ ದೃಷ್ಟಿಯಲ್ಲಿ ಮಿನುಗಾರಿಕೆ ಬಂದರು ಮತ್ತು ಜೆಟ್ಟಿಗಳ ನಿರ್ಮಾಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಲಾಗುವುದು.